R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು
ವಿಶೇಷ ರಾಜ್ಯ ಪತ್ರಿಕೆ

ಭಾಗ– IVಎ Part– IVA	ಬೆಂಗಳೂರು, ಗುರುವಾರ, 16 , ಏಪ್ರಿಲ್, 2020 (ಚೈತ್ರ 27, ಶಕವರ್ಷ 1942) Bengaluru, THURSDAY, 16 , APRIL, 2020 (Chaithra 27, ShakaVarsha 1942)	ನಂ. 135 No. 135

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಸಿವಿಲ್ ಸೇವೆಗೆ ನೇಮಕಾತಿಗಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಸಿಂಧುತ್ವ ಪತ್ರವನ್ನು (ಇ-ಸಿಂಧುತ್ವ) ಸೇವಾ ಸಿಂಧುಯೋಜನೆಯಡಿ ಪಡೆಯುವುದನ್ನು ಕಡ್ಡಾಯಗೊಳಿಸುವ ಬಗ್ಗೆ.

ಓದಲಾಗಿದೆ: ದಿನಾಂಕ: 15.2.2018ರ ಸುತ್ತೋಲೆಸಂಖ್ಯೆ: ಸಿಆಸುಇ 76 ಸೇನೆನಿ 2018.

ಪ್ರಸ್ತಾವನೆ:

1. ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ ನೇಮಕಾತಿಗಳು ಮುಂತಾದವುಗಳ ನಿಯಮಗಳು, 1992ರ ನಿಯಮ 9 ರನ್ವಯ ಸಿಂಧುತ್ವ ಪ್ರಮಾಣ ಪತ್ರ ಪಡೆಯದ ಯಾವುದೇ ವ್ಯಕ್ತಿಯನ್ನು ಸರ್ಕಾರದ ಸೇವೆಗಾಗಲೀ ಅಥವಾ ಹುದ್ದೆಗಾಗಲೀ ಇಲ್ಲವೇ ಸಾರ್ವಜನಿಕ ಕ್ಷೇತ್ರದ ಕಾರ್ಯ ಸಂಸ್ಥೆಗಾಗಲಿ ನೇಮಕ ಮಾಡಲು ಅವಕಾಶವಿಲ್ಲದ ಕಾರಣ ಸಿಂಧುತ್ವ ವರದಿ ಸ್ವೀಕೃತವಾಗದ ಅಭ್ಯರ್ಥಿಗೆ ನೇಮಕಾತಿ ಆದೇಶ ಹೊರಡಿಸತಕ್ಕದ್ದಲ್ಲ. ಅದರಂತೆ ಮೇಲೆ ಓದಲಾದ ಸುತ್ತೋಲೆಯಲ್ಲಿ ರಾಜ್ಯ ಸಿವಿಲ್ ಸೇವೆಗೆ ನೇಮಕಾತಿ ಆದೇಶ ನೀಡುವ ಪೂರ್ವದಲ್ಲಿ ಸಕ್ಷಮ ನೇಮಕಾತಿ ಪ್ರಾಧಿಕಾರಗಳು ಆಯ್ಕೆಯಾದ ಅಭ್ಯರ್ಥಿಗಳ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಸಿಂಧುತ್ವವನ್ನು ಕಡ್ಡಾಯವಾಗಿ ಪಡೆದು ತದನಂತರವೇ ನೇಮಕಾತಿ ಆದೇಶವನ್ನು ನೀಡುವಂತೆ ಸೂಚನೆಗಳನ್ನು ನೀಡಲಾಗಿರುತ್ತದೆ.

2. ಇದುವರೆವಿಗೂ, ಸಿಂಧುತ್ವ ಪ್ರಮಾಣ ಪತ್ರ ನೀಡುವ ಪ್ರಕ್ರಿಯೆ ಹಸ್ತ ಚಾಲಿತವಾಗಿತ್ತು (Manual). ಈ ಕಾರಣದಿಂದಾಗಿ ಪ್ರಮಾಣ ಪತ್ರ ನೀಡುವಿಕೆಯಲ್ಲಿ ವಿಳಂಬವಾಗುತ್ತಿತ್ತು ಹಾಗೂ ಈ ಪ್ರಕ್ರಿಯೆಯ ಹಂತವನ್ನು ಪರಿಶೀಲಿಸುವುದಾಗಲೀ ಅಥವಾ ಜಿಲ್ಲೆ / ಇಲಾಖೆ / ರಾಜ್ಯ ಮಟ್ಟದಲ್ಲಿ ಬಾಕಿ ಉಳಿಕೆಯಾಗಲೀ (Pendency) ತಿಳಿದುಬರುತ್ತಿರಲಿಲ್ಲ.

3. ಸಿಂಧುತ್ವ ಪ್ರಮಾಣ ಪತ್ರ ಪಡೆಯುವ ಪ್ರಕ್ರಿಯೆಯನ್ನು ಸರಳೀಕೃತಗೊಳಿಸುವ ಮತ್ತು ತ್ವರಿತಗೊಳಿಸುವ ಅವಶ್ಯಕತೆಯನ್ನು ಮನಗಂಡು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ವತಿಯಿಂದ ಸೇವಾಸಿಂಧು ಯೋಜನೆಯಡಿ ತಂತ್ರಾಂಶ ಆಧಾರಿತ ಸಿಂಧುತ್ವ ಪ್ರಮಾಣ ಪತ್ರವನ್ನು ನೀಡುವ ಮಾಹಿತಿ ತಂತ್ರಜ್ಞಾನ ವ್ಯವಸ್ಥೆಯೊಂದನ್ನು ಅಭಿವೃದ್ಧಿಪಡಿಸಲಾಗಿದೆ.ಈ ವ್ಯವಸ್ಥೆಯನ್ನು ಅನುಷ್ಠಾನಕ್ಕೆ ತರುವುದರಿಂದ ಪ್ರಕ್ರಿಯೆ ಹಂತವನ್ನು ಪರಿಶೀಲಿಸಲು ಹಾಗೂ ವಿತರಣೆಗಾಗಿ ಬಾಕಿ ಉಳಿದಿರುವ ಪ್ರಸ್ತಾವನೆಗಳ ಬಗ್ಗೆ ನಿಗಾವಹಿಸಲು ಸುಲಭವಾಗುತ್ತದೆ.

4. ಆದ ಕಾರಣ, ಪ್ರಸ್ತುತ ಸಿಂಧುತ್ವ ಪ್ರಮಾಣ ಪತ್ರ ನೀಡಲು ಹಿಂದಿನ ವ್ಯವಸ್ಥೆಯನ್ನು ಕೈಬಿಟ್ಟು ನೂತನವಾಗಿ ಅಭಿವೃದ್ಧಿಪಡಿಸಲಾಗಿರುವ ತಾಂತ್ರಿಕ ವ್ಯವಸ್ಥೆಯನ್ನು ಕಡ್ಡಾಯವಾಗಿ ಬಳಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ, ಈ ಆದೇಶ.

5. ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಿಂಧುತ್ವ ಪ್ರಮಾಣ ಪತ್ರ ವಿತರಣೆಗಾಗಿ ಹಿಂದಿನ ಹಸ್ತಚಾಲಿತ ವ್ಯವಸ್ಥೆಯನ್ನು ಕೈಬಿಟ್ಟು ಸೇವಾಸಿಂಧು ಯೋಜನೆಯಡಿ ಹೊಸದಾಗಿ ಅಭಿವೃದ್ಧಿಪಡಿಸಲಾದ ಇ-ಸಿಂಧುತ್ವ ತಾಂತ್ರಿಕ ವ್ಯವಸ್ಥೆಯನ್ನು (IT System) ಕಡ್ಡಾಯವಾಗಿ ಬಳಸಲು ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

6. ಎಲ್ಲಾ ಜಿಲ್ಲಾಧಿಕಾರಿಗಳು ಸಿಂಧುತ್ವ ಪ್ರಮಾಣ ಪತ್ರ ಕೋರಿ ಬರುವ ಸ್ವೀಕೃತಿಗಳನ್ನು ವಿಲೇ ಮಾಡಲು ಸದರಿ ವ್ಯವಸ್ಥೆಯನ್ನು ಕಡ್ಡಾಯವಾಗಿ ಬಳಸತಕ್ಕದ್ದು ಹಾಗೂ ಹಿಂದಿನ ಹಸ್ತಚಾಲಿತ ವ್ಯವಸ್ಥೆಯನ್ನು ಸಂಪೂರ್ಣವಾಗಿ ಕೈಬಿಡತಕ್ಕದ್ದು.

7. ಸೇವಾಸಿಂಧು ಯೋಜನೆಯಡಿ ಸಿದ್ಧಪಡಿಸಲಾದ ಇ-ಸಿಂಧುತ್ವ ಪ್ರಮಾಣ ಪತ್ರ ಪಡೆಯದ ಯಾವುದೇ ವ್ಯಕ್ತಿಯನ್ನು ಸರ್ಕಾರದ ಸೇವೆಗಾಗಲೀ ಅಥವಾ ಹುದ್ದೆಗಾಗಲೀ ಇಲ್ಲವೇ ಸಾರ್ವಜನಿಕ ಕ್ಷೇತ್ರದ ಕಾರ್ಯ ಸಂಸ್ಥೆಗಾಗಲಿ ನೇಮಕಾತಿ ಮಾಡಿಕೊಳ್ಳತಕ್ಕದ್ದಲ್ಲ ಅಥವಾ ನೇಮಕಾತಿ ಆದೇಶವನ್ನು ಸಕ್ಷಮ ನೇಮಕಾತಿ ಪ್ರಾಧಿಕಾರವು ಹೊರಡಿಸತಕ್ಕದ್ದಲ್ಲ. ಅಂದರೆ ಇನ್ನು ಮುಂದೆ ಹಸ್ತಚಾಲಿತವಾಗಿ ನೀಡುವ ಸಿಂಧುತ್ವ ಪ್ರಮಾಣ ಪತ್ರವನ್ನು ಅಸಿಂಧು ಎಂದು ಪರಿಗಣಿಸಲಾಗುವುದು.

8. ಈ ಯೋಜನೆಯ ಅನುಷ್ಠಾನಕ್ಕಾಗಿ ಎಲ್ಲಾ ಇಲಾಖೆಗಳ ಹಾಗೂ ಜಿಲ್ಲಾಧಿಕಾರಿಗಳ ಕಛೇರಿಯ ಸಿಬ್ಬಂದಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಇದರಡಿಯ ಇ-ಆಡಳಿತ ಕೇಂದ್ರದ ವತಿಯಿಂದ ತರಬೇತಿ ನೀಡಲಾಗುವುದು. ಸದರಿ ತಾಂತ್ರಿಕ ವ್ಯವಸ್ಥೆಯಲ್ಲಿ ಯಾವುದೇ ಬದಲಾವಣೆ ಅಗತ್ಯವಿದ್ದಲ್ಲಿ ಇ-ಆಡಳಿತ ಕೇಂದ್ರದಿಂದ ನಿರ್ವಹಿಸಲಾಗುತ್ತದೆ.

9. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು, ಪ್ರಧಾನ ಕಾರ್ಯದರ್ಶಿಯವರು ಮತ್ತು ಕಾರ್ಯದರ್ಶಿಯವರು ಅವರ ಆಡಳಿತ ವ್ಯಾಪ್ತಿಗೊಳಪಡುವ ಸಕ್ಷಮ ನೇಮಕಾತಿ ಪ್ರಾಧಿಕಾರಗಳು / ಆಯೋಗಗಳು / ವಿಶ್ವವಿದ್ಯಾಲಯಗಳು / ಸ್ಥಳೀಯ ಸಂಸ್ಥೆಗಳು / ಸ್ವಾಯತ್ತ ಸಂಸ್ಥೆಗಳು / ನಿಗಮ / ಮಂಡಳಿಗಳು / ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳು ಈ ಮಾಹಿತಿ ತಂತ್ರಜ್ಞಾನ ವ್ಯವಸ್ಥೆಯನ್ನು ಬಳಸಿಕೊಂಡು ಆಯ್ಕೆಯಾದ ಅಭ್ಯರ್ಥಿಗಳ ಇ-ಸಿಂಧುತ್ವ ಪ್ರಮಾಣ ಪತ್ರವನ್ನುಸೇವಾಸಿಂಧು ಯೋಜನೆಯ ಮೂಲಕ ಮಾತ್ರ ಪಡೆಯುವುದನ್ನು ಈ ಮೂಲಕ ಕಡ್ಡಾಯಗೊಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE Date: 2020.04.16 15:46:06 +05'30'